OS. NO 207/2009

PW.1

ದಿನಾಂಕಃ23.08.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ- ವಾದಿ ಪರ ವಕೀಲರಾದ ಶ್ರೀ ಹೆಚ್.ಎಲ್.ಎ ರವರಿಂದಃ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ಮ್ಯೂಟೇಶನ್ ಎಕ್ಸ್ ಟ್ರಾಕ್ಟ್ ಎಂ ಆರ್ ನಂ.3/99-2000 ರ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಒಂದು ತೆರಿಗೆ ಪಾವತಿಸಿದ ಕಂದಾಯದ ರಶೀದಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

7 ಕೈ ಬರಹದ ಪಹಣಿಗಳನ್ನು ಹಾಜರುಪಡಿಸಿದ್ದೇನೆ. (ಅದರ ಪೈಕಿ ಒಂದು ಪಹಣಿ ಹರಿದು ಹೋಗಿರುತ್ತದೆ.) ಅವುಗಳನ್ನು ಕ್ರಮವಾಗಿ ನಿಪಿ-3 ರಿಂದ 9 ಎಂದು ಗುರುತಿಸಲಾಯಿತು.

OS. NO 207/2009

PW.1

ಸರ್ವೆ ನಂ. 64/2 ಜಮೀನಿಗೆ ಸಂಬಂಧಿಸಿದಂತೆ 2005-2006 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ 78/2002 ರಲ್ಲಿ ಮಾಡಲಾದ ತೀರ್ಪು ಮತ್ತು ಡಿಕ್ರಿಯ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-11 ಮತ್ತು 12 ಎಂದು ಗುರುತಿಸಲಾಯಿತು.

ದಿನಾಂಕ.13.07.1999 ರಂದು ಭೂ ನ್ಯಾಯಾಮಂಡಲಿ ಕನಕಪುರ ರವರು ಮಾಡಿದ ಆದೇಶದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-13 ಎಂದು ಗುರುತಿಸಲಾಯಿತು.

**ಮುಂದುವರಿದ ಮುಖ್ಯವಿಚಾರಣೆ : ವಾದಿ ಪರ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.**

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

(ರಾಧಾ ಎಸ್.)
ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,
ಕನಕಪುರ